KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER :

ದಿನಾಂಕ : DATE : 15/05/2019

ರಾಜ್ಯ / STATE

# ವೋಟರ್ ಐಡಿ ಪತ್ರೆ; ಮುನಿರತ್ನ ವಿರುದ್ಧ ಸಿಬಿಐ ತನಿಖೆ ಕೋರಿದ್ದ ಅರ್ಜಿ ವಾಪಸ್

**ಬೆಂಗಳೂರು:** ಕಳೆದ ವಿಧಾನಸಭೆ ಚುನಾವಣಾ ವೇಳೆ ರಾಜರಾಜೇಶ್ವರಿ ನಗರದ ಫ್ಲಾಟ್‌ವೊಂದರಲ್ಲಿ ಸಾವಿರಾರು ಮತದಾರರ ಗುರುತಿನ ಚೀಟಿ ಪತ್ತೆ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸುವಂತೆ ಕೋರಿ ಹೈಕೋರ್ಟ್‌ನಲ್ಲಿ ಸಲ್ಲಿಸಲಾಗಿದ್ದ ಅರ್ಜಿಯನ್ನು ದೂರುದಾರ ರಾಕೇಶ್ ಹಿಂಪಡೆದಿದ್ದಾರೆ.

ಆಶ್ಚರ್ಯಕರ ಬೆಳವಣಿಗೆಯಲ್ಲಿ ರಾಕೇಶ್ ಬುಧವಾರ ಮೆಮೋ ಸಲ್ಲಿಸಿ ಅರ್ಜಿ ಹಿಂಪಡೆದರು.

ನ್ಯಾ. ಜಾನ್ ಮೈಕೆಲ್ ಕುನ್ಹಾ ಅವರಿದ್ದ ಏಕಸದಸ್ಯಪೀಠದ ಮುಂದೆ ಅರ್ಜಿ ವಿಚಾರಣೆಗೆ ಬಂದಿತು. ಆಗ ಅರ್ಜಿದಾರರ ಪರ ವಕೀಲ, ತಮ್ಮ ಕಕ್ಷಿದಾರರು ಅರ್ಜಿ ಹಿಂಪಡೆಯಲಿದ್ದಾರೆ ಎಂದು ಮೆಮೊ ಸಲ್ಲಿಸಿದರು. ಅದನ್ನು ದಾಖಲಿಸಿಕೊಂಡ ನ್ಯಾಯಪೀಠ ಅರ್ಜಿ ವಾಪಸ್ ಪಡೆಯಲು ಸಮ್ಮತಿ ಸೂಚಿಸಿತು.

ಇತ್ತೀಚೆಗೆ ಕಾಂಗ್ರೆಸ್ ಬಿಟ್ಟು, ಬಿಜೆಪಿ ಜೊತೆ ಗುರುತಿಸಿಕೊಂಡಿರುವ ಅನರ್ಹ ಶಾಸಕ ಮುನಿರತ್ನ, ಈ ಪ್ರಕರಣದಲ್ಲಿ ಆರೋಪ ಎದುರಿಸುತ್ತಿದ್ದಾರೆ. ಅವರು ಮೂಲ ದೂರುದಾರ ರಾಕೇಶ್ ಮನವೊಲಿಸಿ ಅರ್ಜಿ ವಾಪಸ್ ಪಡೆಸುವಲ್ಲಿ ಯಶಸ್ವಿಯಾಗಿದ್ದಾರೆ.

ಕಳೆದ ವಾರ ಅರ್ಜಿ ನ್ಯಾ. ಪಿ.ಎಸ್. ದಿನೇಶ್ ಕುಮಾರ್ ಅವರ ಮುಂದೆ ವಿಚಾರಣೆ ನಡೆದಿತ್ತು. ವಿಚಾರಣೆ ಇನ್ನೇನು ಮುಕ್ತಾಯ ಹಂತದಲ್ಲಿತ್ತು. ಈ ಹಂತದಲ್ಲಿ ಅರ್ಜಿ ವಾಪಸ್ ಪಡೆದಿರುವುದು ಕುತೂಹಲ ಮೂಡಿಸಿದೆ.